**All India Radio: Bangalore**
**National Bulletin In Kannada**
**25.05.2026 07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**25.05.2026 07.35 a.m.**

**<><><><>**

ಮುಖ್ಯಾಂಶಗಳು

1. ಎಲ್ಲ ರೀತಿಯ ಭಯೋತ್ಪಾದನೆ ಎದುರಿಸಲು ಭಾರತ - ಅಮೆರಿಕ ಸನ್ನದ್ಧ - ಸಚಿವ ಡಾ.ಎಸ್. ಜೈಶಂಕರ್
2. ಭಾರತ್ ಮಂಟಪಂ ನಲ್ಲಿ ಅಮೆರಿಕದ ೨೫೦ನೇ ಸ್ವಾತಂತ್ರ್ಯೋತ್ಸದ ಆಚರಣೆ: ಅಮೆರಿಕ-ಭಾರತದ ವಿಶ್ವಾಸಾರ್ಹ ರಾಷ್ಟ್ರ-ಡೋನಾಲ್ಡ್ ಟ್ರಂಪ್
3. ಇಂದು ರಾಷ್ಟ್ರಪತಿ ಭವನದಲ್ಲಿ ೨೦೨೬ನೇ ಸಾಲಿನ ೬೬ ಸಾಧಕರಿಗೆ ಪದ್ಮ ಪ್ರಶಸ್ತಿ ಪ್ರದಾನ
4. ಐಪಿಎಲ್ ಟಿ-೨೦ ಕ್ರಿಕೆಟ್: ನಾಲ್ಕನೇ ತಂಡವಾಗಿ ರಾಜಸ್ಥಾನ ರಾಯಲ್ಸ್ ಪ್ಲೇಆಫ್ ಪ್ರವೇಶ

<><><><>

ಭಾರತ ಮತ್ತು ಅಮೆರಿಕ ಎಲ್ಲಾ ರೀತಿಯ ಭಯೋತ್ಪಾದನೆಯನ್ನು ಎದುರಿಸಲು ಬಲವಾದ ಆಸಕ್ತಿಯನ್ನು ಹೊಂದಿವೆ ಎಂದು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ಅಮೆರಿಕದ ೨೫೦ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಸಭೆಯನ್ನುದ್ದೇಶಿಸಿ ಮಾತನಾಡಿದ ಡಾ.ಜೈಶಂಕರ್, ಭಯೋತ್ಪಾದನೆಯ ಬಗ್ಗೆ ಶೂನ್ಯ ಸಹಿಷ್ಣುತೆಯ ಬಗ್ಗೆ ಭಾರತ ಮತ್ತು ಅಮೆರಿಕ ಯಾವಾಗಲೂ ಸ್ಪಷ್ಟವಾಗಿರಬೇಕು ಮತ್ತು ಅದಕ್ಕಾಗಿಯೇ ಅವರ ಭಯೋತ್ಪಾದನಾ ನಿಗ್ರಹ ಸಹಕಾರವು ತುಂಬಾ ಮುಖ್ಯವಾಗಿದೆ ಎಂದು ಹೇಳಿದ್ದಾರೆ. ಜಾಗತಿಕ ಆರ್ಥಿಕತೆಯ ಅಪಾಯವನ್ನು ತಗ್ಗಿಸಲು ಮತ್ತು ಜಗತ್ತಿಗೆ ಹೆಚ್ಚಿನ ಆಯ್ಕೆಗಳನ್ನು ಒದಗಿಸುವಲ್ಲಿ ಎರಡೂ ರಾಷ್ಟ್ರಗಳು ಸಾಮಾನ್ಯ ಆಸಕ್ತಿಯನ್ನು ಹೊಂದಿವೆ ಎಂದು ಪ್ರತಿಪಾದಿಸಿದ ಅವರು, ಅನೇಕ ಸಮನ್ವಯಗಳು ಎರಡೂ ರಾಷ್ಟ್ರಗಳನ್ನು ಬಹು ಕ್ಷೇತ್ರಗಳಲ್ಲಿ ಪರಿಣಾಮಕಾರಿ ಕಾರ್ಯತಂತ್ರದ ಪಾಲುದಾರರನ್ನಾಗಿ ಮಾಡುತ್ತವೆ ಎಂದು ಹೇಳಿದ್ದಾರೆ.

<><><><>

ನವದೆಹಲಿಯ ಭಾರತ್ ಮಂಟಪಂನಲ್ಲಿ ನಿನ್ನೆ ಅಮೆರಿಕದ ೨೫೦ನೇ ಸ್ವಾತಂತ್ರ್ಯ ವರ್ಷಾಚರಣೆ ಕಾರ್ಯಕ್ರಮದಲ್ಲಿ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಭಾರತದಲ್ಲಿನ ಅಮೆರಿಕ ರಾಯಭಾರಿ ಸೆರ್ಜಿಯೋ ಗೋರ್ ಅವರಿಗೆ ದೂರವಾಣಿ ಕರೆ ಮಾಡಿದರು. ಪ್ರಧಾನಿ ನರೇಂದ್ರ

ಮೋದಿ ಅವರನ್ನು ತಮ್ಮ ಮಿತ್ರ ಎಂದು ಬಣ್ಣಿಸಿದ ಟ್ರಂಪ್, ಎರಡೂ ರಾಷ್ಟ್ರಗಳ ನಡುವಿನ ಸಂಬಂಧ ಇಂದು ಎಂದಿಗಿಂತಲೂ ಹೆಚ್ಚು ಗಟ್ಟಿಯಾಗಿದೆ ಎಂದು ಹೇಳಿದ್ದಾರೆ. ತಾವು ಪ್ರಧಾನಿ ನರೇಂದ್ರ ಮೋದಿ ಅವರ ಅಭಿಮಾನಿ ಎಂದು ತಿಳಿಸಿದ ಅವರು, ಭಾರತ ತಮ್ಮ ಮೇಲೆ ಶೇಕಡಾ ನೂರರಷ್ಟು ವಿಶ್ವಾಸ ಇಡಬಹುದು ಎಂದು ಟ್ರಂಪ್ ಅಭಯ ನೀಡಿದರು. ಸಭಿಕರು ಟ್ರಂಪ್ ಅವರ ಮಾತುಗಳನ್ನು ಕೇಳಲು ಅನುವಾಗುವಂತೆ ರಾಯಭಾರಿ ಗೋರ್, ತಮ್ಮ ದೂರವಾಣಿಯನ್ನು ಮೈಕ್ ಬಳಿ ಹಿಡಿದಿದ್ದರು.

<><><>

ರಾಷ್ಟ್ರಪತಿ ಭವನದಲ್ಲಿಂದು ನಡೆಯಲಿರುವ ೨೦೨೬ನೇ ಸಾಲಿನ ಮೊದಲ ನಾಗರಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ೬೬ ಪದ್ಮ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಹಲವರು ಭಾಗವಹಿಸಲಿರುವ ಸಮಾರಂಭದಲ್ಲಿ ರಾಷ್ಟ್ರಪತಿ ಅವರು ಎರಡು ಪದ್ಮವಿಭೂಷಣ, ಆರು ಪದ್ಮಭೂಷಣ ಮತ್ತು ೫೮ ಪದ್ಮಶ್ರೀ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ. ೨೦೨೬ನೇ ಸಾಲಿನಲ್ಲಿ ಐದು ಪದ್ಮವಿಭೂಷಣ, ೧೩ ಪದ್ಮಭೂಷಣ ಮತ್ತು ೧೧೩ ಪದ್ಮಶ್ರೀ ಪ್ರಶಸ್ತಿಗಳು ಸೇರಿದಂತೆ ೧೩೧ ಪದ್ಮ ಪ್ರಶಸ್ತಿಗಳನ್ನು ಪ್ರದಾನ ಮಾಡಲು ರಾಷ್ಟ್ರಪತಿ ಅವರು ಅನುಮೋದನೆ ನೀಡಿದ್ದಾರೆ. ಉಳಿದ ಪದ್ಮ ಪ್ರಶಸ್ತಿ ಪುರಸ್ಕೃತರಿಗೆ ನಂತರ ನಡೆಯಲಿರುವ ಸಮಾರಂಭದ ಎರಡನೇ ಸುತ್ತಿನಲ್ಲಿ ಪ್ರದಾನ ಮಾಡಲಾಗುವುದು. ಪ್ರತಿ ವರ್ಷ ಗಣರಾಜ್ಯೋತ್ಸವದ ಸಂದರ್ಭದಲ್ಲಿ ಪ್ರಶಸ್ತಿಗಳನ್ನು ಘೋಷಿಸಲಾಗುತ್ತದೆ. ಕಲೆ, ಸಮಾಜ ಸೇವೆ, ಸಾರ್ವಜನಿಕ ವ್ಯವಹಾರಗಳು, ವಿಜ್ಞಾನ ಮತ್ತು ಎಂಜಿನಿಯರಿಂಗ್, ವ್ಯಾಪಾರ ಮತ್ತು ಕೈಗಾರಿಕೆ, ವೈದ್ಯಕೀಯ, ಸಾಹಿತ್ಯ ಮತ್ತು ಶಿಕ್ಷಣ, ಕ್ರೀಡೆ, ನಾಗರಿಕ ಸೇವೆ ಮುಂತಾದ ವಿವಿಧ ಕ್ಷೇತ್ರಗಳಲ್ಲಿ ಪ್ರತಿಷ್ಠಿತ ನಾಗರಿಕ ಗೌರವಗಳನ್ನು ನೀಡಲಾಗುತ್ತದೆ. ಅಸಾಧಾರಣ ಮತ್ತು ವಿಶಿಷ್ಟ ಸೇವೆಗಾಗಿ ಪದ್ಮವಿಭೂಷಣ, ಉನ್ನತ ಶ್ರೇಣಿಯ ವಿಶಿಷ್ಟ ಸೇವೆಗಾಗಿ ಪದ್ಮಭೂಷಣ ಮತ್ತು ಯಾವುದೇ ಕ್ಷೇತ್ರದಲ್ಲಿ ವಿಶಿಷ್ಟ ಸೇವೆಗಾಗಿ ಪದ್ಮಶ್ರೀ ನೀಡಲಾಗುತ್ತದೆ.

<><><>

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಇಂದಿನಿಂದ ಮೂರು ದಿನಗಳ ಕಾಲ ಭಾರತೀಯ ಉದ್ಯಮ ನಾಯಕರ ನಿಯೋಗದೊಂದಿಗೆ ಕೆನಡಾಗೆ ಭೇಟಿ ನೀಡಲಿದ್ದಾರೆ. ಈ

ಸಂದರ್ಭದಲ್ಲಿ ಅವರು, ಒಟ್ಟಾವಾ ಮತ್ತು ಟೊರಾಂಟೋ ನಗರಗಳಲ್ಲಿ ವ್ಯಾಪಾರ ಮತ್ತು ಹೂಡಿಕೆ ಕುರಿತಂತೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಭಾರತ-ಕೆನಡಾ ಸಮಗ್ರ ಆರ್ಥಿಕ ಸಹಭಾಗಿತ್ವ ಒಪ್ಪಂದ-ಸಿಇಪಿಎ ಕುರಿತ ಮಾತುಕತೆಯನ್ನು ವೇಗಗೊಳಿಸುವುದು ಈ ಭೇಟಿಯ ಪ್ರಮುಖ ಉದ್ದೇಶವಾಗಿದೆ. ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ, ಮಾರ್ಚ್ ತಿಂಗಳಲ್ಲಿ ಭಾರತಕ್ಕೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಸಿಇಪಿಎ ಒಪ್ಪಂದದ ಷರತ್ತುಗಳಿಗೆ ಸಹಿ ಹಾಕಲಾಗಿತ್ತು. ಮೊದಲ ಹಂತದ ಮಾತುಕತೆ ವಚುವಲ್ ಮೂಲಕ ನಡೆದಿದ್ದು, ಎರಡನೇ ಹಂತದ ಮಾತುಕತೆ ಮೇ ೮ ರಂದು ಪೂರ್ಣಗೊಂಡಿದೆ. ಭಾರತೀಯ ನಿಯೋಗದ ಕೆನಡಾ ಭೇಟಿಯ ಸಂದರ್ಭದಲ್ಲಿ ಮತ್ತೊಂದು ಹಂತದ ಮಾತುಕತೆ ನಡೆಯುವ ನಿರೀಕ್ಷೆಯಿದ್ದು, ೨೦೩೦ರೊಳಗಾಗಿ ದ್ವಿಪಕ್ಷೀಯ ವ್ಯಾಪಾರವನ್ನು ೭೦ ಶತಕೋಟಿ ಡಾಲರ್‌ಗೆ ಹೆಚ್ಚಿಸುವ ಗುರಿ ಹೊಂದಲಾಗಿದೆ.

<><><>

ಏಕರೂಪ ನಾಗರಿಕ ಸಂಹಿತೆಯ ವ್ಯಾಪ್ತಿಯಿಂದ ಎಲ್ಲಾ ಬುಡಕಟ್ಟು ಸಮುದಾಯಗಳನ್ನು ಹೊರಗಿಡಲು ಸರ್ಕಾರ ವಿಶೇಷ ನಿಬಂಧನೆಗಳನ್ನು ರೂಪಿಸಿದ್ದು, ಅವರ ಹಕ್ಕುಗಳು ಸಂಪೂರ್ಣವಾಗಿ ರಕ್ಷಿಸಲ್ಪಡಲಿವೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ. ದೆಹಲಿಯಲ್ಲಿ ನಿನ್ನೆ ನಡೆದ ಜನಜಾತಿ ಸಾಂಸ್ಕೃತಿಕ ಸಮಾಗಮವನ್ನು ಉದ್ದೇಶಿಸಿ ಮಾತನಾಡಿದ ಅವರು, ಏಕರೂಪ ನಾಗರಿಕ ಸಂಹಿತೆಯು ಯಾವುದೇ ಬುಡಕಟ್ಟು ಹಕ್ಕುಗಳನ್ನು ಉಲ್ಲಂಘಿಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಬುಡಕಟ್ಟು ಸಮುದಾಯದ ಮಹಾನ್ ನಾಯಕ ಮತ್ತು ಸ್ವಾತಂತ್ರ್ಯ ಹೋರಾಟಗಾರ ಭಗವಾನ್ ಬಿರ್ಸಾ ಮುಂಡಾ ಅವರ ಆದರ್ಶಗಳನ್ನು ಸ್ಮರಿಸಿದ ಸಚಿವರು, ಬುಡಕಟ್ಟು ಜನರಿಗೆ ತಮ್ಮ ಭೂಮಿ ಮತ್ತು ಅರಣ್ಯದ ಮೇಲೆ ನ್ಯಾಯಸಮ್ಮತ ಒಡೆತನವಿದ್ದು, ಅವುಗಳನ್ನು ಯಾರೂ ಅತಿಕ್ರಮಿಸಲು ಸಾಧ್ಯವಿಲ್ಲ ಎಂಬ ಸಂದೇಶವನ್ನು ಬಿರ್ಸಾ ಮುಂಡಾ ನೀಡಿದ್ದರು ಎಂದು ಅವರು ಸ್ಮರಿಸಿದ್ದಾರೆ.

<><><>

ಫಾಲ್ಟಾ ವಿಧಾನಸಭಾ ಚುನಾವಣೆಯಲ್ಲಿ ದಾಖಲೆಯ ಅಂತರದಿಂದ ಗೆಲುವು ಸಾಧಿಸಿದ ಬಿಜೆಪಿ ಅಭ್ಯರ್ಥಿ ದೇಬಾಂಗ್ಶು ಪಾಂಡಾ ಅವರನ್ನು ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ. ಈ ಗೆಲುವು ಪಶ್ಚಿಮ ಬಂಗಾಳದ ಜನತೆಯ ಬಿಜೆಪಿಯ ಬಗ್ಗೆ ಇರುವ ಅಚಲ ನಂಬಿಕೆಯನ್ನು ಸೂಚಿಸುತ್ತದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ಹೇಳಿದ್ದಾರೆ. ಪಶ್ಚಿಮ ಬಂಗಾಳ ಸರ್ಕಾರದ ಅಸಾಧಾರಣ ಕಾರ್ಯವನ್ನು ಜನರು ನೋಡುತ್ತಿದ್ದಾರೆ. ಆದ್ದರಿಂದ ಪಕ್ಷವನ್ನು ಮತ್ತಷ್ಟು

ಆಶೀರ್ವದಿಸಲು ನಿರ್ಧರಿಸಿದ್ದಾರೆ ಎಂದು ಅವರು ಹೇಳಿದರು. ಪಶ್ಚಿಮ ಬಂಗಾಳದಾದ್ಯಂತ ಬಿಜೆಪಿ ಕಾರ್ಯಕರ್ತರ ಅತ್ಯುತ್ತಮ ಕಾರ್ಯಕ್ಕಾಗಿ ಪ್ರಧಾನಿ ಅವರನ್ನು ಅಭಿನಂದಿಸಿದ್ದಾರೆ.

<><><>

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ - ಎನ್‌ಟಿಎ ಈ ತಿಂಗಳ ೨೮ರಂದು ನಿಗದಿಯಾಗಿದ್ದ ಸಾಮಾನ್ಯ ವಿಶ್ವವಿದ್ಯಾಲಯ ಪ್ರವೇಶ ಪರೀಕ್ಷೆ ಪದವಿಪೂರ್ವ (ಸಿಯುಇಟಿ -ಯುಜಿ) ೨೦೨೬ ಪರೀಕ್ಷೆಗಳನ್ನು ಮುಂದೂಡಿದೆ. ಸರ್ಕಾರದ ಅಧಿಸೂಚನೆಯ ಪ್ರಕಾರ ಈದ್-ಉಲ್-ಜುಹಾ (ಬಕ್ರೀದ್) ರಜಾದಿನದ ದಿನಾಂಕವನ್ನು ಬದಲಾಯಿಸಿದ ದೃಷ್ಟಿಯಿಂದ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಎನ್‌ಟಿಎ ತಿಳಿಸಿದೆ. ಪೀಡಿತ ಅಭ್ಯರ್ಥಿಗಳಿಗೆ ಪರಿಷ್ಕೃತ ಪರೀಕ್ಷಾ ದಿನಾಂಕಗಳನ್ನು ಶೀಘ್ರದಲ್ಲೇ ಘೋಷಿಸಲಾಗುವುದು ಎಂದು ಏಜೆನ್ಸಿ ಮಾಹಿತಿ ನೀಡಿದೆ. ಅಭ್ಯರ್ಥಿಗಳು ಮೇಲಿನವುಗಳನ್ನು ಗಮನಿಸಿ ಅದಕ್ಕೆ ಅನುಗುಣವಾಗಿ ಕಾರ್ಯನಿರ್ವಹಿಸಲು ಸೂಚಿಸಲಾಗಿದೆ. ಇತ್ತೀಚಿನ ನವೀಕರಣಗಳಿಗಾಗಿ ನಿಯಮಿತವಾಗಿ ತನ್ನ ಅಧಿಕೃತ ವೆಬ್‌ಸೈಟ್‌ಗೆ ಭೇಟಿ ನೀಡುವಂತೆ ಅಭ್ಯರ್ಥಿಗಳಿಗೆ ಎನ್‌ಟಿಎ ಸಲಹೆ ನೀಡಿದೆ. ಯಾವುದೇ ಪ್ರಶ್ನೆಗಳು ಅಥವಾ ಸ್ಪಷ್ಟೀಕರಣಗಳಿಗಾಗಿ, ಅಭ್ಯರ್ಥಿಗಳು ಎನ್ ಟಿಎ ಸಹಾಯವಾಣಿಯನ್ನು ೦ ೧ ೧-೪ ೦ ೭ ೫ ೯ ೦ ೦ ೦ ನಲ್ಲಿ ಸಂಪರ್ಕಿಸಬಹುದು ಅಥವಾ cuet-uginta.ac.in ಗೆ ಇಮೇಲ್ ಮಾಡಬಹುದು.

<><><>

ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ (ಸಿಬಿಎಸ್‌ಇ) ೧೨ನೇ ತರಗತಿ ಬೋರ್ಡ್ ಪರೀಕ್ಷೆಗಳಿಗೆ ಉತ್ತರ ಪುಸ್ತಕಗಳ ಸ್ಕ್ಯಾನ್ ಮಾಡಿದ ಫೋಟೋಕಾಪಿಗಳನ್ನು ಪಡೆಯುವ ಕೊನೆಯ ದಿನಾಂಕವನ್ನು ಇನ್ನೂ ಒಂದು ದಿನ ವಿಸ್ತರಿಸಿದೆ.

ವಿದ್ಯಾರ್ಥಿಗಳಿಗೆ ವಿನಂತಿಗಳನ್ನು ಸಲ್ಲಿಸಲು ಸಾಕಷ್ಟು ಸಮಯವನ್ನು ಒದಗಿಸಲು ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಸಿಬಿಎಸ್‌ಇ ತಿಳಿಸಿದೆ. ಮರು ಮೌಲ್ಯಮಾಪನ ವಿನಂತಿಗಳನ್ನು ಸ್ವೀಕರಿಸುವ ಪ್ರಾರಂಭದ ದಿನಾಂಕವನ್ನು ಶೀಘ್ರದಲ್ಲೇ ತಿಳಿಸಲಾಗುವುದು ಎಂದು ಮಂಡಳಿ ಹೇಳಿದೆ. ಸ್ಕ್ಯಾನ್ ಮಾಡಿದ ಮತ್ತು ಮೌಲ್ಯಮಾಪನ ಮಾಡಿದ ಉತ್ತರ ಪುಸ್ತಕದ ಕೊನೆಯ ಪ್ರತಿಯನ್ನು ಅರ್ಜಿದಾರರಿಗೆ ಲಭ್ಯವಾದ ನಂತರ ಕನಿಷ್ಠ ೨ ದಿನಗಳವರೆಗೆ ಪೋರ್ಟಲ್ ತೆರೆದಿರುತ್ತದೆ ಎಂದು ಮಂಡಳಿ ಪುನರುಚ್ಚರಿಸಿದೆ.

<><><>

ಕರ್ನಾಟಕದ ಉತ್ತರ ಕನ್ನಡ ಜಿಲ್ಲೆಯಲ್ಲಿ ಸಂಭವಿಸಿದ ಜಲಸಮಾಧಿ ದುರಂತದಲ್ಲಿ ಜೀವ ಕಳೆದುಕೊಂಡವರ ಬಗ್ಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್

ಮತ್ತು ಪ್ರಧಾನಮಂತ್ರಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಈ ದುರಂತದಲ್ಲಿ ಜೀವ ಕಳೆದುಕೊಂಡ ಸುದ್ದಿ ತೀವ್ರ ನೋವು ಉಂಟುಮಾಡಿದೆ. ಗಾಯಾಳುಗಳು ಶೀಘ್ರ ಚೇತರಿಸಿಕೊಳ್ಳಲಿ ಎಂದು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಉಪರಾಷ್ಟ್ರಪತಿ ರಾಧಾಕೃಷ್ಣನ್, ಸಂತ್ರಸ್ತ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದು, ಮೃತಪಟ್ಟವರ ಕುಟುಂಬಗಳಿಗೆ ಧೈರ್ಯ ಮತ್ತು ಮನೋಬಲ ದೊರೆಯಲಿ, ನಾಪತ್ತೆಯಾದವರು ಸುರಕ್ಷಿತವಾಗಿ ಹಿಂದಿರುಗಲಿ ಎಂದೂ ಅವರು ಪ್ರಾರ್ಥಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ, ಮೃತರ ಕುಟುಂಬಗಳಿಗೆ ಪ್ರಧಾನಮಂತ್ರಿ ರಾಷ್ಟ್ರೀಯ ಪರಿಹಾರ ನಿಧಿಯಿಂದ ತಲಾ ೨ ಲಕ್ಷ ರೂಪಾಯಿ ಹಾಗೂ ಗಾಯಗೊಂಡವರಿಗೆ ತಲಾ ೫೦ ಸಾವಿರ ರೂಪಾಯಿ ನೆರವು ನೀಡಲಾಗುವುದು ಎಂದು ಅವರು ತಿಳಿಸಿದ್ದಾರೆ.

<><><><>

ಕೋಲ್ಕತ್ತಾದ ಈಡನ್ ಗಾರ್ಡನ್ಸ್ ಕ್ರೀಡಾಂಗಣದಲ್ಲಿಕಳೆದ ರಾತ್ರಿ ನಡೆದ ಐಪಿಎಲ್ ಟಿ೨೦ ಕ್ರಿಕೆಟ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡ ೪೦ ರನ್ ಗಳ ಭರ್ಜರಿ ಕೋಲ್ಕತ್ತಾ ನೈಟ್ ರೈಡರ್ಸ್ ತಂಡವನ್ನು ಮಣಿಸಿದೆ. ಇದರೊಂದಿಗೆ ಉಭಯ ತಂಡಗಳು ಲೀಗ್ ಹಂತದಲ್ಲೇ  ಅಭಿಯಾನ ಮುಗಿಸಿದವು. ಮೊದಲಿಗೆ ಬ್ಯಾಟ್ ಮಾಡಿದ ಡೆಲ್ಲಿ ೨೦ ಓವರ್ ಗಳಲ್ಲಿ ೫ ವಿಕೆಟ್ ನಷ್ಟಕ್ಕೆ  ೨೦೪ ರನ್ ಗುರಿ ನೀಡಿತು. ಇದಕ್ಕೆ ಪ್ರತಿಯಾಗಿ ಕೋಲ್ಕೊತಾ ತಂಡ, ೧೮.೪ ಓವರ್ ಗಳಲ್ಲಿ ಕೇವಲ ೧೬೩ ರನ್ ಗಳಿಗೆ ಸೀಮಿತಗೊಂಡಿತು. ಡೆಲ್ಲಿ ಪರ ಮೂರು ವಿಕೆಟ್ ಕಿತ್ತ ಕುಲ್ದೀಪ್ ಯಾದವ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಇದಕ್ಕೂ ಮುನ್ನ ವಾಂಖೆಡೆ ಕ್ರೀಡಾಂಗಣದಲ್ಲಿ ನಡೆದ ಮತ್ತೊಂದು ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ತಂಡ ಆತಿಥೇಯ ಮುಂಬೈ ಇಂಡಿಯನ್ಸ್ ತಂಡವನ್ನು ೩೦ ರನ್ ಗಳಿಂದ ಮಣಿಸಿತು. ಬ್ಯಾಟಿಂಗ್ ಮಾಡಿದ ರಾಜಸ್ಥಾನ್ ರಾಯಲ್ಸ್ ನಿಗದಿತ ೨೦ ಓವರ್ ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೨೦೫ ರನ್ ಗಳಿಸಿತು. ೨೦೬ ರನ್ ಗಳ ಗುರಿ ಬೆನ್ನತ್ತಿದ ಮುಂಬೈ ಇಂಡಿಯನ್ಸ್ ನಿಗದಿತ ೨೦ ಓವರ್ ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೭೫ ರನ್ ಗಳಿಸುವಲ್ಲಿ ಯಶಸ್ವಿಯಾಯಿತು. ಲೀಗ್ ಪಂದ್ಯಗಳ ಅಂತ್ಯಕ್ಕೆ ಒಟ್ಟು ೧೬ ಅಂಕಗಳನ್ನು ಕಲೆಹಾಕಿದ ರಾಜಸ್ಥಾನ ನಾಲ್ಕನೇ ತಂಡವಾಗಿ ಪ್ಲೇಆಫ್ ಪ್ರವೇಶಿಸಿತು. ಉದ್ಘಾಟನಾ ಆವೃತ್ತಿಯ ಚಾಂಪಿಯನ್ ರಾಜಸ್ಥಾನ ಇದೇ ೨೭ರಂದು ಎಲಿಮಿನೇಟರ್ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ತಂಡವನ್ನು ಎದುರಿಸಲಿದೆ. ಇದೇ ೨೬ರಂದು ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಬೆಂಗಳೂರು ಮತ್ತು ಗುಜರಾತ್ ತಂಡಗಳು ಮುಖಾಮುಖಿಯಾಗಲಿವೆ.

<><><><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ ‘ಮನ್ ಕಿ ಬಾತ್’ನಲ್ಲಿ ಇದೇ ೩೧ ರಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಭಾರತೀಯರನ್ನು ಉದ್ದೇಶಿಸಿ ತಮ್ಮ ಮನದಾಳದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್ನ' ೧೩೪ ನೇ ಆವೃತ್ತಿಯಾಗಿದೆ. ಕೇಳುಗರು ಉಚಿತ ದೂರವಾಣಿ ಸಂಖ್ಯೆ ೧೮೦೦-೧೧-೭೮೦೦ ಮೂಲಕ ಕಾರ್ಯಕ್ರಮಕ್ಕಾಗಿ ತಮ್ಮ ಆಲೋಚನೆಗಳು ಮತ್ತು ಸಲಹೆಗಳನ್ನು ಕಳುಹಿಸಬಹುದಾಗಿದೆ. ನರೇಂದ್ರ ಮೋದಿ ಅಪ್ಲಿಕೇಶನ್ ಅಥವಾ MyGov ಓಪನ್ ಫೋರಂ ಮೂಲಕ ಆನ್‌ಲೈನ್‌ನಲ್ಲಿಯೂ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಬಹುದು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>